ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

## ಸ್ವಚ್ಛತೆಯೇ ಸೇವೆ ಅಭಿಯಾನದ ಮೂಲಕ ಹೊಸ ಮೈಲಿಗಲ್ಲು ಸೃಷ್ಟಿಸಿದ

# ಚಿಕ್ಕಮಗಳೂರು ಜಿಲ್ಲೆ




"ಸ್ವಚ್ಛತೆಯ ದೈವತ್ವ" ಅನ್ನೋ ಮಾತು ಮಹಾತ್ಮ ಗಾಂಧೀಜಿ ಅವರ ಧ್ಯೇಯವಾಕ್ಯವಾಗಿತ್ತು. ಗಾಂಧೀಜಿಯವರ ಈ ಕನಸನ್ನು ನನಸು ಮಾಡುವ ನಿಟ್ಟಿನಲ್ಲಿ ಸೆಪ್ಟೆಂಬರ್ 15 ರಿಂದ ಅಕ್ಟೋಬರ್ 02 ರವರೆಗೆ ಅಂದರೆ 15 ದಿನಗಳ ಕಾಲ ಸ್ವಚ್ಛತೆಯೇ ಸೇವೆ ಅಭಿಯಾನವನ್ನು ರಾಜ್ಯದ ಎಲ್ಲಾ ಜಿಲ್ಲೆಗಳ ಗ್ರಾಮೀಣ ಪ್ರದೇಶಗಳಲ್ಲಿ ಹಮ್ಮಿಕೊಳ್ಳಲಾಗಿತ್ತು.

ಸ್ವಚ್ಛ ಗ್ರಾಮಗಳಿಂದಲೇ ಸ್ವಚ್ಛ ಭಾರತ ನಿರ್ಮಾಣ ಸಾಧ್ಯ. ಈ ಉದ್ದೇಶದಿಂದಲೇ, ಸ್ವಚ್ಛತೆಯೇ ಸೇವೆ ಆಂದೋಲನದ ಅಂಗವಾಗಿ ಪ್ರತೀ ಗ್ರಾಮ ಪಂಚಾಯಿತಿಗಳಲ್ಲಿ ಸ್ವಚ್ಛತಾ ಶ್ರಮದಾನ ಯಶಸ್ವಿಯಾಗಿ ನಡೆಯಿತು. ಪ್ರತಿಯೊಂದು ಜಿಲ್ಲೆಗಳು ಸಕ್ರಿಯವಾಗಿ ಈ ಆಂದೋಲನದಲ್ಲಿ ಪಾಲ್ಗೊಂಡಿದ್ದವು. ಅದರಲ್ಲೂ ವಿಶೇಷವಾಗಿ ಚಿಕ್ಕಮಗಳೂರು ಜಿಲ್ಲೆ ಈ ಅಭಿಯಾನದಲ್ಲಿ ಹೊಸ ಮೈಲಿಗಲ್ಲನ್ನೇ ಸೃಷ್ಟಿಸಿದೆ.

ಎಲ್ಲೆಡೆ ಸ್ವಚ್ಛತೆಯನ್ನು ಕಾಪಾಡಿ, ಸುಂದರ ಸ್ವಚ್ಛ ಗ್ರಾಮಗಳನ್ನು ರೂಪಿಸುವ ಮಹತ್ವಾಕಾಂಕ್ಷೆಯನ್ನು ತಲುಪಲು ಚಿಕ್ಕಮಗಳೂರು ಜಿಲ್ಲೆಯ ಅಧಿಕಾರಿಗಳು ಹಾಗೂ ಗ್ರಾಮಸ್ಥರು 15 ದಿನಗಳ ಕಾಲ ಸಕ್ರಿಯವಾಗಿ ಅಭಿಯಾನದಲ್ಲಿ ಪಾಲ್ಗೊಂಡಿದ್ದರು.

ಈ ವರ್ಷದ ಅಭಿಯಾನವನ್ನು ಕಸಮುಕ್ತ /ತ್ಯಾಜ್ಯ ಮುಕ್ತ ಭಾರತ ಎಂದು ಘೋಷಿಸಲಾಗಿದ್ದು, ಎಲ್ಲೆಡೆ ಸದೃಶ್ಯ ಸ್ವಚ್ಛತೆ ಸಾಧಿಸಿ, ಸ್ವಚ್ಛ ಸುಂದರ ಸದೃಢ ಗ್ರಾಮಗಳನ್ನು ರೂಪಿಸುವ ಮಹತ್ವಾಕಾಂಕ್ಷೆಯನ್ನು ಹೊಂದಲಾಗಿದೆ. ಕಳೆದ ವರ್ಷದಂತೆಯೇ, ಈ ವರ್ಷವೂ ಸಹ ಗ್ರಾಮಗಳ ಸ್ವಚ್ಛತೆಗೆ, ಸ್ವಯಂ ಪ್ರೇರಿತರಾಗಿ ಶ್ರಮದಾನ ಚಟುವಟಿಕೆಗಳಲ್ಲಿ ಭಾಗವಹಿಸುವಂತೆ ಪ್ರೇರೆಪಿಸಲಾಯಿತು. ಜಿಲ್ಲೆಯ ತಾಲೂಕು / ಗ್ರಾಮ ಪಂಚಾಯಿತಿ ವ್ಯಾಪ್ತಿಗಳಲ್ಲಿ ಹೆಚ್ಚು ಜನ ಜಂಗುಳಿಯಿರುವ ಸ್ಥಳಗಳಾದ ಬಸ್ ನಿಲ್ದಾಣ, ರೈಲು ನಿಲ್ದಾಣ, ಕೆರೆ, ಹಳ್ಳ, ನದಿ ತೀರ, ಸಮುದಾಯ ಭವನ, ಪ್ರವಾಸಿ ತಾಣಗಳು, ಐತಿಹಾಸಿಕ ಸ್ಮಾರಕಗಳು, ಕಲ್ಯಾಣಿಗಳು, ಚರಂಡಿಗಳು ಮತ್ತು ನಾಲಾಗಳು ಮುಂತಾದ ಸ್ಥಳಗಳಲ್ಲಿ ಸ್ವಚ್ಛತೆಯ ಮತ್ತು ಏಕಬಳಕೆ ಪ್ಲಾಸ್ಟಿಕ್ ವಸ್ತುಗಳ ಬಳಕೆಯನ್ನು ಸಂಪೂರ್ಣವಾಗಿ ನಿಷೇಧದ ಹಾಗೂ ಇತರ ವಿಷಯಗಳ ಕುರಿತು ಜಾಗೃತಿ, ದೃಶ್ಯ ಸ್ವಚ್ಛತೆ ಕಾಯ್ದುಕೊಳ್ಳಲು ಶ್ರಮದಾನ ಮತ್ತು ವಿವಿಧ ಚಟುವಟಿಕೆಗಳನ್ನು ಆಯೋಜಿಸಲಾಗಿತ್ತು.



### ಸದರಿ ಅಭಿಯಾನ ನಿಮಿತ್ತ ವಿವಿಧ ದಿನಗಳಲ್ಲಿ ಹಮ್ಮಿಕೊಂಡಿದ್ದ ಸ್ವಚ್ಛತಾ ಶ್ರಮದಾನದ ವಿವರ

- ಶಾಲೆ ಹಾಗೂ ಅಂಗನವಾಡಿ ವಿದ್ಯಾರ್ಥಿಗಳಿಗೆ, ಗ್ರಾಮಸ್ಥರಿಗೆ ಪಂಚಾಯಿತಿ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಸ್ವಚ್ಛತಾ ಪ್ರತಿಜ್ಞಾ ವಿಧಿ ಬೋಧನೆ.
- **SHG** ಸದಸ್ಯರುಗಳಿಗೆ ಆರೋಗ್ಯ ತಪಾಸಣೆ ಶಿಬಿರ ಹಾಗೂ ಹಸಿ ಮತ್ತು ಒಣ ಕಸ ಸಂಗ್ರಹಣಾ ಶಿಬಿರ
- ಸರ್ಕಾರಿ ಕಚೇರಿ, ಶಾಲೆ, ಆರೋಗ್ಯ ತಪಾಸನಾ ಕೇಂದ್ರ ಹಾಗೂ ಸರ್ಕಾರೇತರ ಕಟ್ಟಡಗಳ ಸುತ್ತಮುತ್ತ ಸ್ವಚ್ಛತಾ ಕಾರ್ಯ
- ನದಿಮೂಲಗಳು, ಪ್ರೇಕ್ಷಣೀಯ ಪ್ರವಾಸಿ ತಾಣಗಳು, ರಸ್ತೆ ಬದಿ, ರೈಲ್ವೆ ಸ್ಟೇಷನ್,ಬಸ್ ನಿಲ್ದಾಣ, ಐತಿಹಾಸಿಕ ಸ್ಮಾರಕ, ಚರಂಡಿ, ನಾಲಾಗಳ ಸ್ವಚ್ಛತೆ
- ಏಕ ಬಳಕೆ ಪ್ಲಾಸ್ಟಿಕ್ ನಿಷೇಧ ಕುರಿತು ಜಾಗೃತಿ ಮೂಡಿಸಿರುವುದು.

**ಹೀಗೆ ಹತ್ತು ಹಲವು ಸ್ವಚ್ಛತಾ ಶ್ರಮದಾನ ಹಾಗೂ ಜಾಗೃತಿ ಮೂಡಿಸುವ ಕಾರ್ಯಗಳನ್ನು ಯಶಸ್ವಿಯಾಗಿ ನಡೆಸಲಾಗಿದೆ.**

### ಸ್ವಚ್ಛತೆಯೇ ಸೇವೆ ಅಭಿಯಾನದಲ್ಲಿ ಸಕ್ರಿಯ ಭಾಗವಹಿಸುವಿಕೆಯಿಂದ ರಾಜ್ಯದಲ್ಲೇ ಅಗ್ರಸ್ಥಾನಕ್ಕೇರಿದ ಚಿಕ್ಕಮಗಳೂರು ಜಿಲ್ಲೆ:

15 ದಿನಗಳ ಕಾಲ ನಡೆದ ಸ್ವಚ್ಛತೆಯೇ ಸೇವೆ ಅಭಿಯಾನವು ಎಲ್ಲಾ ಜಿಲ್ಲೆಗಳಲ್ಲಿ ಯಶಸ್ವಿಯಾಗಿ ನಡೆದಿದೆ. ಈ ಅಭಿಯಾನದಲ್ಲಿ ದಾಖಲೆ ಸೃಷ್ಟಿಸಿದೆ. ಚಿಕ್ಕಮಗಳೂರು ಜಿಲ್ಲೆಯ ಪಂಚಾಯಿತಿ ಅಧಿಕಾರಿಗಳು, ವಿದ್ಯಾರ್ಥಿಗಳು ಹಾಗೂ ಗ್ರಾಮಸ್ಥರ ಸಕ್ರಿಯ ಭಾಗವಹಿಸುವಿಕೆ ಇದಕ್ಕೆ ಕಾರಣ. ಲಕ್ಷಾಂತರ ಜನರ ಭಾಗವಹಿಸುವಿಕೆ ಈ ಅಭಿಯಾನದಲ್ಲಿ ಚಿಕ್ಕಮಗಳೂರು ಜಿಲ್ಲೆಯನ್ನು ಅಗ್ರಸ್ಥಾನಕ್ಕೇರಿಸಿದೆ.

15 ದಿನಗಳ ಅಂತರದಲ್ಲಿ ಸ್ವಚ್ಛತಾ ಶ್ರಮದಾನದಲ್ಲಿ ಭಾಗವಹಿಸುವವರ ಸಂಖ್ಯೆಯಲ್ಲಿ 4 ಬಾರಿ ಮೊದಲ ಸ್ಥಾನ, 3 ಬಾರಿ 2ನೇ ಸ್ಥಾನ ಹಾಗೂ 1 ಬಾರಿ 3ನೇ ಸ್ಥಾನ ಪಡೆದಿದೆ.

ಸ್ವಚ್ಛತಾ ಕಾರ್ಯದಲ್ಲಿ ಭಾಗವಹಿಸಲು ಸಾರ್ವಜನಿಕರು ಆನ್ ಲೈನ್ ನಲ್ಲಿ ನೋಂದಣಿ ಮಾಡಿಕೊಳ್ಳುವ ಅವಕಾಶ ನೀಡಲಾಗಿತ್ತು. ಇನ್ನು ಶ್ರಮದಾನದಲ್ಲಿ ಭಾಗವಹಿಸುವವರಿಗೆ ವಿವಿಧ ಅನುಕೂಲಗಳನ್ನು ಕೂಡ ವ್ಯವಸ್ಥೆ ಮಾಡಲಾಗಿತ್ತು.

ಗ್ರಾಮೀಣ ಜನರ ಆರೋಗ್ಯದಲ್ಲಿ ಸುಸ್ಥಿರತೆಯನ್ನು ಸಾಧಿಸುವ ಗುರಿಯೊಂದಿಗೆ ಸ್ವಚ್ಛತೆಯೇ ಸೇವೆ ಅಭಿಯಾನವನ್ನು ಆರಂಭಿಸಲಾಗಿದ್ದು, ಈಗ ಜನರಲ್ಲಿ ಸಮಗ್ರ ಸ್ವಚ್ಛತೆಯ ಅರಿವು ಮೂಡಿಸುವಲ್ಲಿ ಯಶಸ್ವಿಯಾಗಿದೆ.

ಸ್ವಚ್ಛ ಭಾರತ ಒಂದು ಹೆಜ್ಜೆ ಸ್ವಚ್ಛತೆಯ ಕಡೆಗೆ | ಸ್ವಚ್ಛ ಸಂಕೀರ್ಣ | ಸ್ವಚ್ಛಮೇವ ಜಯತೇ | ಜಲೋತ್ಸವ ಮನೆ ಮನೆಗೆ ಗಂಗೆ | ಮನೆ ಮನೆಗೆ ಗಂಗೆ ಜಲ ಜೀವನ್ ಮಿಷನ್